ಅ) ಆರಾಧನಾ ಯೋಜನೆಯ ಅನುಷ್ಠಾನಕ್ಕೆ ಜಿಲ್ಲಾ ಸಮಿತಿ ಮತ್ತು ತಾಲ್ಲೂಕು ಸಮಿತಿಗಳ ಬದಲಾಗಿ ವಿಧಾನ ಸಭಾ ಕ್ಷೇತ್ರವಾರು ಸಮಿತಿಗಳನ್ನು ರಚಿಸಲಾಗುತ್ತಿದೆ. ಈಗಾಗಲೇ 17 ವಿಧಾನ ಸಭಾ ಕ್ಷೇತ್ರಗಳಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಉಳಿದ ವಿಧಾನ ಸಭಾ ಕ್ಷೇತ್ರದ ಸಮಿತಿ ರಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಸಂಖ್ಯೆ

571 - ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಸಂಖ್ಯೆ ಎಷ್ಟು?

ಆ) ಅವುಗಳನ್ನು ಯಾವಾಗ ತುಂಬಲಾಗುವುದು

ಇ) ಗ್ರಾಮ ಲೆಕ್ಕಾಧಿಕಾರಿಗಳನ್ನು ನೇಮಕ ಮಾಡಿ ಎಷ್ಟು ವರ್ಷವಾಗಿದೆ (ಕೊನೆಯದಾಗಿ ನೇಮಕ ಮಾಡಿದ ವರ್ಷ)

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) 1007.

ಆ) ಖಾಲಿ ಇರುವ ಹುದ್ದೆಗಳನ್ನು ತುಂಬುವ ವಿಚಾರವನ್ನು ಸರ್ಕಾರವು ಪರಿಶೀಲಿಸುತ್ತಿದೆ.

ಇ) ಎರಡು ವರ್ಷಗಳಾಗಿವೆ. (1994 ರಲ್ಲಿ 863 ಸಕ್ರಮಗೊಂಡ ದಿನಗೂಲಿ ನೌಕರರನ್ನು ಮತ್ತು 1545 ಮಿತ ವೇತನ ಪದವೀಧರರನ್ನು ನೇಮಕ ಮಾಡಿದೆ)

ರಾಜ್ಯದಲ್ಲಿ ಆಧುನಿಕ ಕೃಷಿ ಪದ್ಧತಿಯನ್ನು ಆಳವಡಿಸುವುದು

574 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಎಷ್ಟು ಎಕರೆಗಳಲ್ಲಿ ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಲಾಗಿದೆ.

ಆ) ಆಧುನಿಕ ಕೃಷಿ ತಂತ್ರಜ್ಞಾನ ರೈತನಿಗೆ ತನ್ನ ಮನೆ ಬಾಗಿಲಿನಲ್ಲಿ ದೊರೆಯಲು ಸರ್ಕಾರದವರು ಹಾಕಿಕೊಂಡಿರುವ ಕಾರ್ಯಕ್ರಮಗಳಾವುವು?

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) :

ಅ) ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸುವುದು ಒಂದು ಅವಿರತ ಕಾರ್ಯವಿಧಾನ ಈ ನೂತನ ಕೃಷಿ ಪದ್ಧತಿಗಳನ್ನು ರಾಜ್ಯದ ಕೃಷಿ ಯೋಗ್ಯ ಭೂಮಿಗೆ ಅಳವಡಿಸಲು ಪುನರ್‌ರಚಿತ ಕೃಷಿ ಪದ್ಧತಿಯ ಮೂಲಕ ಪ್ರಯತ್ನಿಸಲಾಗುತ್ತಿದೆ.